ಬೈಲಹೊಂಗಲ ತಾಲ್ಲೂಕಿನಲ್ಲಿ ಪಶು ಆಸ್ಪತ್ರೆ ತೆರೆಯುವುದು

3102 (3434) : ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ವಣ್ಣೂರು ಹಾಗೂ ಸವದತ್ತಿ ತಾಲ್ಲೂಕಿನ ಗ್ರಾಮಗಳಲ್ಲಿ ಪಶು ಚಿಕಿತ್ಸಾ ಕೇಂದ್ರಗಳನ್ನು ತೆರೆಯಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಎಂ. ಮಹಾದೇವ್ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು):

ಅ) ಹೊಸದಾಗಿ ಪಶು ಚಿಕಿತ್ಸಾ ಕೇಂದ್ರಗಳನ್ನು ತೆರೆಯುವ ಯಾವುದೇ ಪ್ರಸ್ತಾವನೆ ಸದ್ಯಕ್ಕೆ ಇಲ್ಲ.

ಸವದತ್ತಿ ತಾಲ್ಲೂಕಿನಲ್ಲಿ ಪಶು ಚಿಕಿತ್ಸಾ ಕೇಂದ್ರವನ್ನು ಮೇಲ್ದರ್ಜೆಗೇರಿಸುವುದು

3103 (3435) : ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಮಾಸ್ತಮರ್ಡಿ ಹಾಗು ಸವದತ್ತಿ ತಾಲ್ಲೂಕಿನ ಚಿಕ್ಕೊಪ್ಪ ಗ್ರಾಮಗಳಲ್ಲಿರುವ ಪಶುಚಿಕಿತ್ಸಾ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಎಂ. ಮಹಾದೇವ್ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು):

ಅ) ಈ ತರಹದ ಪ್ರಸ್ತಾವನೆ ಸರ್ಕಾರದ ಮುಂದೆ ಸದ್ಯಕ್ಕೆ ಇರುವುದಿಲ್ಲ.

ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತರ ಅಭಿವೃದ್ಧಿ

3105 (3445) : ಶ್ರೀ ಕೃಷ್ಣಪ್ಪ ಎ (ದೊಡ್ಡಬಳ್ಳಾಪುರ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ ಕಳೆದ ಮೂರು ವರ್ಷಗಳಿಂದ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ ಬಿಡುಗಡೆಯಾಗಿರುವ ಹಣವೆಷ್ಟು; (ವರ್ಷಾವಾರು ಮಾಹಿತಿ ನೀಡುವುದು);

ಆ) ಈ ಮೊತ್ತವನ್ನು ಯಾವ ಯಾವ ಯೋಜನೆಗಳಿಗೆ ಎಷ್ಟೆಷ್ಟು ಖರ್ಚು ಮಾಡಲಾಗಿದೆ; ಖರ್ಚಾಗದೆ ಉಳಿದಿರುವ ಹಣವೆಷ್ಟು;

ಇ) ದೊಡ್ಡಬಳ್ಳಾಪುರ ತಾಲ್ಲೂಕಿಗೆ ಯಾವ ಯಾವ ಯೋಜನೆಗಳಿಗೆ ಎಷ್ಟೆಷ್ಟು ಖರ್ಚು ಮಾಡಲಾಗಿದೆ; ವರ್ಷಾವಾರು ಮಾಹಿತಿ ನೀಡುವುದು?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖಾಕಾರ್ಯಕ್ರಮಗಳಿಗಾಗಿ ಕಳೆದ 3 ವರ್ಷಗಳಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರ ಬಿಡುಗಡೆ ಮಾಡಿರುವ ಹಣ ಕೆಳಕಂಡಂತಿದೆ:-

ಹಿಂದುಳಿದ ವರ್ಗಗಳ ಇಲಾಖೆ : (ರೂ.ಲಕ್ಷಗಳಲ್ಲಿ)

	2000-01	2001-02	2002-03
ರಾಜ್ಯ (ರೂ.ಲಕ್ಷಗಳಲ್ಲಿ)	10224.84	10669.21	11152.07